ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.
ಸಿಸಿ ನಂಬರ್:- 214/2024

| | | |
|---|---|---|
| ಸಾಕ್ಷಿಯ ಹೆಸರು | : ಸಿದ್ದರಾಮಪ್ಪ | ಸಿ.ಡಬ್ಲ್ಯೂ 2 |
| ತಂದೆಯ ಹೆಸರು | : ಓಂಕಾರಪ್ಪ | ಪಿ.ಡಬ್ಲ್ಯೂ 1 |
| ವಯಸ್ಸು | : 35 ವರ್ಷ | |
| ಉದ್ಯೋಗ | : ವ್ಯವಸಾಯ | |
| ವಾಸ ಸ್ಥಳ | : ಸೊಲ್ಲಾಪುರ | |

ದಿನಾಂಕಃ29.09.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ಆರೋಪಿಯ ಪರಿಚಯ ನನಗೆ ಇರುವುದಿಲ್ಲ, ಈ ಮೊದಲು ನಾನು ಆತನನ್ನು ನೋಡಿರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಈಗ 1 ವರ್ಷದ ಹಿಂದೆ ಪೋಲೀಸರು ಸಹಿ ಮಾಡು ಎಂದಿದ್ದಕ್ಕೆ ಒಂದು ದಾಖಲೆಗೆ ಸಹಿ ಮಾತ್ರ ಮಾಡಿದ್ದೇನೆ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯ ಸಹಿ ಇರುವ ದಾಖಲೆ ಪಂಚನಾಮೆ ಆಗಿದ್ದು ಅದನ್ನು ನಿಪಿ-1 ಎಂದು, ಸಹಿಯನ್ನು 1(ಎ) ಎಂದು ಗುರುತಿಸಲಾಯಿತು.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿನಾಂಕ 11.04.2023 ರಂದು ಪೋಲೀಸರು ನನ್ನನ್ನು ಹುಣಸಘಟ್ಟ ಕ್ರಾಸ್ ಹತ್ತಿರ ಕರೆಯಿಸಿ ಆರೋಪಿಯ ಮೇಲಲೆ ದಾಳಿ ಮಾಡಿ ಆತನ ಕಡೆಯಿಂದ ಒಟ್ಟು 90 ಮಿ.ಲಿ ಯ 144 ಹೈವೇ ಡಿಲಕ್ಸ್ ವಿಸ್ಕಿ ಟೆಟ್ರಾ ಪ್ಯಾಕೇಟುಗಳನ್ನು ಮತ್ತು ವಾಹನ ಸಂಖ್ಯೆ.ಕೆ.ಎ.66 ಕೆ.6964 ನೇದ್ದನ್ನು ಅಮಾನತ್ತು ಪಡಿಸಿಕೊಂಡು, ಸ್ಥಳದಲ್ಲಿಯೇ ಪಂಚನಾಮೆಯನ್ನು ಬರೆದು ನನ್ನ ಮತ್ತು ಬಿ.ಟಿ.ಶಂಕರಪ್ಪ ಇವರುಗಳು ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೋಲೀಸರಿಗೆ ಹೇಳಿಕೆಯನ್ನು ಕೂಡ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ : ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಜ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.